

ದಿನಾಂಕ : DATE : 18/9/20

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

### ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪನೆ: ಸಿಎಂ ಯಡಿಯೂರಪ್ಪ

# ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಹೊಸ ಆಯಾಮ

18/9/20

**ವಿಶ್ವವಾಣಿ ಸುದ್ದಿಮನೆ** ಕಲಬುರಗಿ

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಹೊಸ ಆಯಾಮ ನೀಡುವುದು ನಮ್ಮ ಸರಕಾರದ ಪ್ರಮುಖ ಗುರಿಯಲ್ಲಿ ಒಂದಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಹೈದರಾಬಾದ್ ಕರ್ನಾಟಕ ವಿಮೋಚನಾ ದಿನದ ಅಂಗವಾಗಿ ಕಲಬುರಗಿಯ ಪೊಲೀಸ್ ಪೆರೇಡ್ ಮೈದಾನದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಪ್ರಾದೇಶಿಕ ಅಸಮತೋಲನ ನಿವಾರಣೆ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪಿಸಲಾಗಿದೆ ಎಂದರು.

ಮಾನವ ಸಂಪನ್ಮೂಲ, ಕೃಷಿ, ಸಾಂಸ್ಕೃತಿಕ ಸಂಪವು ನಿಗದಿತ ಗುರಿ ಮುಟ್ಟಿದಾಗ ಯಶಸ್ವಿಯಾಗುತ್ತದೆ. ಅದಕ್ಕೆ ಸರಕಾರದ ಸಂಪೂರ್ಣ ಸಹಕಾರವಿದೆ. ಕಲ್ಯಾಣ ಕರ್ನಾಟಕದ ಉತ್ಸವದ ಮಂಗಳ ಘಳಿಗೆಯಲ್ಲಿ ಈ ಭಾಗದ ಅಭಿವೃದ್ಧಿಯ ಹೊಸ ಶಕೆಗೆ ನಾಂದಿ ಹಾಡಲು ನನಗೆ ಸಂತೋಷವಾಗುತ್ತದೆ ಎಂದರು.

ಈ ಭಾಗಕ್ಕೆ ತಡವಾಗಿ ಸ್ವಾತಂತ್ರ್ಯ ಸಿಕ್ಕಿದೆ. ಸರ್ದಾರ್ ವಲ್ಲಭ ಭಾಯಿ ಪಟೇಲರ ಪ್ರಯತ್ನದಿಂದಾಗಿ ಭಾರತ ಒಕ್ಕೂಟದಲ್ಲಿ ಈ ಭಾಗ ವಿಲೀನವಾಯಿತು. ಪಟೇಲರ ನಿರ್ಧಾರದಿಂದಾಗಿ ಒಂದು ವರ್ಷ ತಡವಾಗಿ ಈ ಭಾಗ ವಿಲೀನವಾಯಿತು. ಹೈದರಾಬಾದ್ ನಿಜಾಮನ ಶೋಷಣೆಯಿಂದ ಮುಕ್ತಿ ಹೊಂದಿದ ದಿನ ಇದಾಗಿದೆ. ಕಳೆದ ವರ್ಷ ಇದೇ ದಿನ ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಕಲ್ಯಾಣ ಕರ್ನಾಟಕ ಎಂದು ಮಾರ್ಪಡಿಸಲಾಗಿದೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಹೊಸ ಆಯಾಮ ನೀಡುತ್ತೇವೆ ಎಂದರು.

ಹೈದರಾಬಾದ್ ಕರ್ನಾಟಕ ವಿಮೋಚನಾ ದಿನದ ಅಂಗವಾಗಿ [illegible] ಪರೇಡ್ ಮೈದಾನದಲ್ಲಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರು ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸಲ್ಲಿಸಿದರು.

[illegible]

ಯಡಿಯೂರಪ್ಪ ಕಲ್ಯಾಣ ಕರ್ನಾಟಕದ ಅಭಿವೃದ್ಧಿಯ ಕನಸುಗಾರ. ಈ ಪ್ರದೇಶದ ಅಭಿವೃದ್ಧಿಗೆ ಸಿಎಂ ವಿಶೇಷ ಆಸಕ್ತಿ ತೋರಿಸಿದ್ದಾರೆ. ನಮ್ಮ ಸರಕಾರ ಬಂದ ಮೇಲೆ ಕಲ್ಯಾಣ ಕರ್ನಾಟಕ ಎಂದು ನಾಮಕರಣ ಮಾಡಿದ್ದೇವೆ. ಈ ಭಾಗದ ಕಲ್ಯಾಣಕ್ಕೆ ಬದ್ಧರಾಗಿದ್ದೇವೆ.

-ಗೋವಿಂದ ಕಾರಜೋಳ ಡಿಸಿಎಂ

ಸಿಎಂ ಯಡಿಯೂರಪ್ಪ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಜಯದೇವ ಹೃದ್ರೋಗ ಸಂಸ್ಥೆ, ನಗರಕ್ಕೆ ನಿರಂತರ ನೂರು ಪೂರೈಕೆ ಯೋಜನೆಗೆ ಅಡಿಗಲ್ಲು, ರಸ್ತೆ ಅಗಲೀಕರಣ, ಜೇವರ್ಗಿ ರಸ್ತೆ ರೈಲ್ವೆ ಮೇಲ್ಸೇತುವೆ, ವಸತಿ ನಿಲಯಗಳ ಉದ್ಘಾಟನೆ ಮಾಡಿದರು.